ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ವನ್ಯಜೀವಿಗಳ ಗಣತಿ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು) –

92 (92) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ವನ್ಯಜೀವಿಗಳ ಗಣತಿ ಕಾರ್ಯವಾಗಿದೆಯೇ; ಯಾವ ಯಾವ ವನ್ಯ ಜೀವಿಗಳು ಎಷ್ಟು ಸಂಖ್ಯೆಯಲ್ಲಿ ಯಾವ ಅರಣ್ಯ ಪ್ರದೇಶದಲ್ಲಿ ಇವೆ; ವನ್ಯ ಜೀವಿ ಗಣತಿ ಕಾರ್ಯ ಪ್ರಾರಂಭವಾಗದಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು;

(ಆ) ವನ್ಯಜೀವಿ ಮತ್ತು ಮಾನವರ ಸಂಘರ್ಷ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳಾವುವು;

(ಇ) ಕಳೆದ ಒಂದು ವರ್ಷದಲ್ಲಿ ಕಾಡು ಪ್ರಾಣಿಗಳ ದಾಳಿಯಿಂದ ಮೃತರಾದವರ ಸಂಖ್ಯೆ ಎಷ್ಟು;

(ಈ) ಕಳೆದ ಒಂದು ವರ್ಷದಲ್ಲಿ ನಾಡಿಗೆ ಬಂದ ಎಷ್ಟು ಕಾಡು ಪ್ರಾಣಿಗಳನ್ನು ರಕ್ಷಿಸಲಾಗಿದೆ; ಯಾವ ಯಾವ ಕಾಡು ಪ್ರಾಣಿಗಳನ್ನು ರಕ್ಷಿಸಿ ಪುರ್ನವಸತಿ ಕಲ್ಪಿಸಲಾಗಿದೆ? (ಜಿಲ್ಲಾವಾರು ವಿವರ ನೀಡುವುದು)